ಪ್ರಸ್ತಾಪ ಅಂಗೀಕರಿಲ್ಪಟ್ಟಿತು

(ಮೊದಲ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾಪದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲ್ಲಿ:- ಮಾನ್ಯ ಅಧ್ಯಕ್ಷರೇ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ವಿಧೇಯಕ, 1994ನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ವಿಧೇಯಕ, 1994ನ್ನು ಅಂಗೀಕರಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(3) ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿಧೇಯಕ 1994

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಧರ್ಮಸಿಂಗ್:- (ಕಂದಾಯ ಮಂತ್ರಿ) ಮಾನ್ಯ ಅಧ್ಯಕ್ಷರೇ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿಧೇಯಕ 1994ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ, ''ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿಧೇಯಕ 1994ನ್ನು ಪರ್ಯಾಲೋಚಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3:-

ಅಧ್ಯಕ್ಷರು:- ''ಖಂದ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ:-

ಅಧ್ಯಕ್ಷರು:- ಪ್ರಸ್ತಾಪ ಏನೆಂದರೆ,''ಮೊದಲ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(ಮೊದಲ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿದೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಧರ್ಮಸಿಂಗ್‌ಃ- (ಕಂದಾಯ ಮಂತ್ರಿ) ಮಾನ್ಯ ಅಧ್ಯಕ್ಷರೇ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿದೇಯಕ 1994ನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರುಃ- ಪ್ರಸ್ತಾಪ ಏನೆಂದರೆ ''ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ವಿಧೇಯಕ 1994ನ್ನು ಅಂಗೀಕರಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(4) ಕರ್ನಾಟಕ ಭೂಕಂದಾಯ (ತಿದ್ದುಪಡಿ) ವಿದೇಯಕ, 1994

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಧರ್ಮಸಿಂಗ್‌ಃ- (ಕಂದಾಯ ಮಂತ್ರಿ) ಮಾನ್ಯ ಅಧ್ಯಕ್ಷರೇ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಭೂಕಂದಾಯ (ತಿದ್ದುಪಡಿ) ವಿಧೇಯಕ, 1994ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

6.00 ಪಿ.ಎಂ

* ಶ್ರೀ ಧರ್ಮಸಿಂಗ್ (ಕಂದಾಯ ಸಚಿವರು)ಃ- ಮಾನ್ಯ ಸಭಾಪತಿಗಳೇ, ಈಗ ಕರ್ನಾಟಕ 1964ರ ಲ್ಯಾಂಡ್ ರೆವಿನ್ಯೂ ಆಕ್ಟ್‌ಗೆ 94ರಲ್ಲಿ ತಿದ್ದುಪಡಿಯನ್ನುತರುತ್ತಾ ಇದ್ದೇವೆ. ಈಗ 1991ರಲ್ಲಿ ಎಲ್ಲಾ ಅಕ್ರಮ ಸಾಗುವಳಿಯನ್ನು ಸಕ್ರಮ ಮಾಡುವ ಬಗ್ಗೆ ಅರ್ಜಿ ಸಲ್ಲಿಸಲು ಹೇಳಿದ್ದೆವು. ಇದರ ಪ್ರಕಾರ 10 ಲಕ್ಷದ 86 ಸಾವಿರ ಅರ್ಜಿಗಳು ನಮ್ಮ ಮುಂದೆ ಇವೆ. ನಾನು